# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ **ಕೃಷಿ, ಶಿಕ್ಷಣ, ಹಿಂದುಳಿದ ವರ್ಗ ಮತ್ತು** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರ ಬಾಕಿ/ಪ್ರಸಕ್ತ ಸಾಲಿನ/ಬಾಕಿ ವೇತನ ಮತ್ತು ಸಂಭಾವನೆಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಲ 2014 ದಿನಾಂಕ:1.2.2014
2. ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿ/ಕಾರ್ಯ ನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ವಿವಿಧ ತಾಲ್ಲೂಕು ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಕೃಷಿ, ಶಿಕ್ಷಣ, ಹಿಂದುಳಿದ ವರ್ಗಗಳ ಕಲ್ಯಾಣ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಮಾಜ ಕಲ್ಯಾಣ ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಮತ್ತು ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆ ಪಾವತಿಗಾಗಿ ವೆಚ್ಚಕ್ಕಾಗಿ ಪ್ರಧಾನ ಲೆಕ್ಕಶೀರ್ಷಿಕೆ: 2202, 2210, 2225, 2435, ಮತ್ತು 2515ರಡಿ ಒಟ್ಟು ರೂ101.34ಲಕ್ಷಗಳನ್ನು ಹೆಚ್ಚುವರಿಯಾಗಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ರೂ.101.34ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–197–1–10–300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 465 ವೆಚ್ಚ 6/2021(ಇ) ದಿನಾಂಕ: 18ನೇ ನವಂಬರ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ ಪ್ರಸಕ್ತ ಸಾಲಿನ ವೇತನ ಹಾಗೂ ಸಂಭಾವನೆ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ101.34ಲಕ್ಷ (ರೂಪಾಯಿ ಒಂದು ನೂರ ಒಂದು ಲಕ್ಷದ ಮೂವತ್ತನಾಲ್ಕು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು. ಲೆಕ್ಕ ಶೀರ್ಷಿಕೆ 2515–00–102–0–63– 034 ಮತ್ತು ,251ರಡಿ ಬಿಡುಗಡೆಗೊಳಿಸಿದ ಅನುದಾನಕ್ಕೆ ಮರು ಹೊಂದಾಣಿಕೆಯ ಅಗತ್ಯವಿರುವುದಿಲ್ಲ. ಸದರಿ ವೆಚ್ಚವನ್ನು ಅಧೇ ಕಾರ್ಯಕ್ರಮದಡಿ ವೆಚ್ಚ ಭರಿಸತಕ್ಕದ್ದು

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಮುಖ್ಯ ಲೆಕ್ಕಾಧಿಕಾರಿಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು. **ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.**

| ಕ್ರ.ಸಂ. | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಕೋಲಾರ | 2515-00-102-0-61-005 | 5.23 |
| 2 | ವಿಜಯಪುರ | 2435-00-101-0-61-005 | 27.24 |
| 3 | ಬೆಳ್ತಂಗಡಿ | 2202-00-101-0-64-005 | 31.03 |
| 4 | ಕನಕಗಿರಿ | 2515-00-102-0-61-005 | 7.78 |
| 5 | ರಾಣೆಬೆನ್ನೂರು | 2515-00-102-0-61-005 | 6.88 |
| 6 | ಬಂಟ್ವಾಳ | 2515-00-102-0-63-034 | 11.60 |
| 7 | ಸಿಂಧನೂರು | 2225-00-103-0-74-005 | 1.20 |
| 8 | ಹೊಸನಗರ | 2210-00-104-0-61-005 | 10.38 |
| | ಒಟ್ಟು | | **101.34** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

1417332292
19.11.2024

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1.ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು

2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ

3.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪ./ಆರೋಗ್ಯ ಮತ್ತು ಕುಟುಂಬ ಕಲ್ಯಾಣ/ಹಿಂ.ವ.ಕಲ್ಯಾಣ ಇಲಾಖೆ

4.ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,

5.ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು

6.ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು

7.ಸಂಬಂಧಪಟ್ಟ ಜಿಲ್ಲಾ/ಉಪ ಖಜಾನಾಧಿಕಾರಿಗಳು,

8.ರಕ್ಷಾ ಕಡತಕ್ಕೆ

9..ಹೆಚ್ಚುವರಿ ಪ್ರತಿ